ತೊರೆದು ಜೀವಿಸಬಹುದೇ ಹರಿ ನಿನ್ನ ಚರಣಗಳ...
ಬರಿದೆ ಮಾತೇಕಿನ್ನು ಅರಿತು ಪೇಳುವೆನಯ್ಯ...

ತೊರೆದು ಜೀವಿಸಬಹುದೇ ಹರಿ ನಿನ್ನ ಚರಣಗಳ...
ತೊರೆದು ಜೀವಿಸಬಹುದೇ ಹರಿ ನಿನ್ನ ಚರಣಗಳ...
ಬರಿದೆ ಮಾತೇಕಿನ್ನು ಅರಿತು ಪೇಳುವೆನಯ್ಯ...
ಬರಿದೆ ಮಾತೇಕಿನ್ನು ಅರಿತು ಪೇಳುವೆನಯ್ಯ...

ತೊರೆದು ಜೀವಿಸಬಹುದೇ ಹರಿ ನಿನ್ನ ಚರಣಗಳ...

ತಾಯಿ ತಂದೆಯ ಬಿಟ್ಟು ತಪವಮಾಡಲುಬಹುದು..
ತಾಯಿ ತಂದೆಯ ಬಿಟ್ಟು ತಪವಮಾಡಲುಬಹುದು..
ದಾಯಾದಿ ಬಂಧುಗಳ ಬಿಡಲುಬಹುದು..
ದಾಯಾದಿ ಬಂಧುಗಳ ಬಿಡಲುಬಹುದು..
ರಾಯ ತಾ ಮುನಿದರೆ ರಾಜ್ಯವನೆ ಬಿಡಬಹುದು...
ರಾಯ ತಾ ಮುನಿದರೆ ರಾಜ್ಯವನೆ ಬಿಡಬಹುದು...
ಕಾಯಜಾಪಿತನಿನ್ನಡಿಯ ಬಿಡಲಾಗದು.. ಬಿಡಲಾಗದು... ಬಿಡಲಾಗದು...

ಒಡಲು ಹಸಿಯಲು ಅನ್ನವಿಲ್ಲದೆಲೆ ಇರಬಹುದು....
ಒಡಲು ಹಸಿಯಲು ಅನ್ನವಿಲ್ಲದೆಲೆ ಇರಬಹುದು....
ಪಡೆದ ಕ್ಷೇತ್ರವಬಿಟ್ಟು ಹೊರಡಬಹುದು..
ಪಡೆದ ಕ್ಷೇತ್ರವಬಿಟ್ಟು ಹೊರಡಬಹುದು..
ಮಡದಿ ಮಕ್ಕಳ ಕಡೆಗೆ ತೊಲಗಿಸಿಯೇ ಬಿಡಬಹುದು...
ಮಡದಿ ಮಕ್ಕಳ ಕಡೆಗೆ ತೊಲಗಿಸಿಯೇ ಬಿಡಬಹುದು...
ಕಡಲೊಡೆಯ ನಿನ್ನಡಿಯ ಘಳಿಗೆ ಬಿಡಲಾಗದು... ಬಿಡಲಾಗದು.. ಬಿಡಲಾಗದು...

ಪ್ರಾಣವನು ಪರರು ಬೇಡಿದರೆತ್ತಿ ಕೊಡಬಹುದು..
ಪ್ರಾಣವನು ಪರರು ಬೇಡಿದರೆತ್ತಿ ಕೊಡಬಹುದು..
ಮಾನದಲಿ ಮನವ ತಗ್ಗಿಸಲುಬಹುದು..
ಮಾನದಲಿ ಮನವ ತಗ್ಗಿಸಲುಬಹುದು..
ಪ್ರಾಣನಾಯಕನಾದ ಆದಿ ಕೇಶವರಾಯ
ಪ್ರಾಣನಾಯಕನಾದ ಆದಿ ಕೇಶವರಾಯ
ಜಾಣ ಶ್ರೀಕೃಷ್ಣ ನಿನ್ನಡಿಯ ಬಿಡಲಾಗದು... ಬಿಡಲಾಗದು.. ಬಿಡಲಾಗದು....

ತೊರೆದು ಜೀವಿಸಬಹುದೇ ಹರಿ ನಿನ್ನ ಚರಣಗಳ...
ತೊರೆದು ಜೀವಿಸಬಹುದೇ ಹರಿ ನಿನ್ನ ಚರಣಗಳ...
ಬರಿದೆ ಮಾತೇಕಿನ್ನು ಅರಿತು ಪೇಳುವೆನಯ್ಯ...
ಬರಿದೆ ಮಾತೇಕಿನ್ನು ಅರಿತು ಪೇಳುವೆನಯ್ಯ...

ತೊರೆದು ಜೀವಿಸಬಹುದೇ ಹರಿ ನಿನ್ನ ಚರಣಗಳ...
ಹರಿ ನಿನ್ನ ಚರಣಗಳ... ಹರಿ ನಿನ್ನ ಚರಣಗಳ...